# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ. ಬಸವರಾಜ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೇಡರೆಡ್ಡಿಹಳ್ಳಿ ಗ್ರಾಮಪಂಚಾಯತಿ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ **D.O.No. Compt/Uplok/BD/2646/2015/DRE-1, ದಿನಾಂಕ: 30.03.2017.**

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 28.03.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

1. ಶ್ರೀ ಹೆಚ್.ವಿ.ಬಸವರೆಡ್ಡಿ ಬಿನ್ ಹೆಚ್.ವೀರಣ್ಣ ಬೇಡರೆಡ್ಡಿಹಳ್ಳಿ ಗ್ರಾಮಪಂಚಾಯತಿ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ರವರು ಶ್ರೀ ಬಸವರಾಜ , ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೇಡರೆಡ್ಡಿಹಳ್ಳಿ ಗ್ರಾಮಪಂಚಾಯತಿ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 9 ರಡಿಯಲ್ಲಿ ದತ್ತವಾದ ಅಧಿಕಾರಿ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

2. ದೂರುದಾರರು ತಮ್ಮ ದೂರಿನಲ್ಲಿ ಬೇಡರೆಡ್ಡಿಹಳ್ಳಿ ಗ್ರಾಮಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸಾರ್ವಜನಿಕ ದಾರಿಗೆ ಬೇಲಿ ಹಾಕಿ ಕುಡಿಯುವ ನೀರನ್ನು ನಲ್ಲಿಯಿಂದ ತರಲು ತೊಂದರೆ ಕೊಡುತ್ತಿದ್ದು, ತನಗೆ ಕುಡಿಯಲು ನೀರು ಬಿಡದೆ ತನ್ನ ಮನೆ ಮುಂದೆ ಬೇಲಿ ಹಾಕಿ ತನಗೆ ತೊಂದರೆ ಕೊಡುತ್ತಿದ್ದಾರೆಂದು ಆಪಾದಿಸಿ ದೂರನ್ನು ಸಲ್ಲಿಸಿರುತ್ತಾರೆ.

3. ದೂರುದಾರರ ದೂರಿನ ಮೇಲೆ ಆಕ್ಷೇಪಣೆಯನ್ನು ಸಲ್ಲಿಸುವಂತೆ ಎದುರುದಾರರಿಗೆ ಕಳುಹಿಸಿದ ನೋಟೀಸು ಜಾರಿಯಾದರೂ ಸಹ ಮತ್ತು ದೂರುವಾಣಿ ಮುಖಾಂತರ ವಿಚಾರ ತಿಳಿಸಿದ್ದರೂ ಸಹ ಎದುರುದಾರರು ಯಾವುದೇ ಆಕ್ಷೇಪಣೆಯನ್ನು ಸಲ್ಲಿಸಿರುವುದಿಲ್ಲ.

4. ದೂರುದಾರರು ದೂರನ್ನು ಪರಿಶೀಲಿಸಿದಾಗ, ದೂರುದಾರರು ಕುಡಿಯುವ ನೀರನ್ನು ಪಡೆಯಲು ಹೋಗುವ ಸಾರ್ವಜನಿಕ ದಾರಿಗೆ ಬೇಲಿ ಹಾಕಿ ಎದುರುದಾರರು ತೊಂದರೆ ಕೊಡುತ್ತಿದ್ದಾರೆಂದು ಆಪಾದನೆಯಿದ್ದು, ಸದರಿ ಆಪಾದನೆಯನ್ನು ಅಲ್ಲಗಳೆಯಲು ಎದುರುದಾರರು ಯಾವುದೇ ಆಕ್ಷೇಪಣೆಯನ್ನಾಗಲೀ ಅಥವಾ ಸಾಕ್ಷ್ಯಾಧಾರಗಳನ್ನಾಗಲೀ ಒದಗಿಸಿರುವುದಿಲ್ಲ. ನೋಟೀಸು ಜಾರಿಯಾದರೂ ಸಹ ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸದೆ ಇದ್ದು, ಆ ಕಾರಣದಿಂದ ದೂರುದಾರರ ದೂರನ್ನು ಅಲ್ಲಗಳೆಯಲು ಯಾವುದೇ ಆಧಾರವಿಲ್ಲ ಮತ್ತು ಎದುರುದಾರರ ವಿರುದ್ಧ ಪ್ರತಿಕೂಲ ನಿರ್ಣಯವನ್ನು ಕೈಗೊಳ್ಳಬೇಕಾಗುತ್ತದೆ. ಎದುರುದಾರರು ಸಾರ್ವಜನಿಕ ದಾರಿಗೆ ತಡೆಯಂಟುಮಾಡಿ ದೂರುದಾರರಿಗೆ ತೊಂದರೆಯನ್ನುಂಟು ಮಾಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆ.

ಈ ಹಿನ್ನೆಲೆಯಲ್ಲಿ ಶ್ರೀ. ಬಸವರಾಜ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೇಡರೆಡ್ಡಿಹಳ್ಳಿ ಗ್ರಾಮಪಂಚಾಯತಿ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1)ರ ಅಡಿಯಲ್ಲಿ ದರ್ನಡತೆ/ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14 (ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/291/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 22-04-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ. ಬಸವರಾಜ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೇಡರೆಡ್ಡಿಹಳ್ಳಿ ಗ್ರಾಮಪಂಚಾಯತಿ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ 1 ರಿಂದ 6 ರವರೆಗಿನ ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿತ್ರದುರ್ಗ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, , ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ
6. ಶ್ರೀ. ಬಸವರಾಜ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೇಡರೆಡ್ಡಿಹಳ್ಳಿ ಗ್ರಾಮಪಂಚಾಯತಿ, ಚಳ್ಳಕೆರೆ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ
7. ಗಣಕಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.